## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ

ಅಂಜನಾಪುರ ಉಪ ವಿಭಾಗ

2ನೇ ಮುಖ್ಯ ರಸ್ತೆ, 6ನೇ ಅಡ್ಡರಸ್ತೆ, ಆರ್.ಬಿ.ಐ ಲೇಔಟ್, ಕೊತ್ತನೂರು ಮುಖ್ಯರಸ್ತೆ, ಬೆಂಗಳೂರು-560078

ಸಂಖ್ಯೆ : ಸ.ಕಾ.ಅ/ಅ.ಉ.ವಿ/ಪಿ.ಆರ್/ /2022-23 ದಿನಾಂಕ :

### ವಾರ್ಡ್ ಸಮಿತಿ ಸಭೆಯ ನಡವಳಿಗಳು

ವಿಷಯ: ಮಾನ್ಯ ಆಯುಕ್ತರು ಬಿಬಿಎಂಪಿ ರವರ ಆದೇಶ ಸಂಖ್ಯೆ.ಬಿ(12)ಪಿಆರ್/35/2020-21 ದಿ:21.09.2020 ರವರ ಆದೇಶದಂತೆ ದಿ:25-05-2022 ರಂದು ವಾರ್ಡ್ ನಂ.195-ಕೋಣನಕುಂಟೆ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

********

### ಸಭೆಗೆ ಹಾಜರಾಗಿದ್ದವರ ಅಧಿಕಾರಿ/ಸಿಬ್ಬಂದಿಗಳ ವಿವರಗಳು

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ | ಹಾಜರಾತಿ |
|---|---|---|---|
| 1 | ಶ್ರೀ ಟಿ.ನಟರಾಜ | ನೋಡಲ್ ಅಧಿಕಾರಿ | ಹಾಜರಿರುತ್ತಾರೆ. |
| 2 | ಶ್ರೀ ಎಮ್.ಜೆ.ಕುಮಾರ್ | ಸದಸ್ಯ ಕಾರ್ಯದರ್ಶಿ/ಸಹಾಯಕ ಅಭಿಯಂತರರು | ಹಾಜರಿರುತ್ತಾರೆ. |
| 3 | ಶ್ರೀ ರಮೇಶ್.ಎಸ್.ಆರ್ | ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) | ಹಾಜರಿರುತ್ತಾರೆ. |
| 4 | ಶ್ರೀ ಮೋಹನ್ | ಕಿರಿಯ ಆರೋಗ್ಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 5 | ಶ್ರೀ ರಮೇಶ್ | ಸಹಾಯಕ ಅಭಿಯಂತರರು (ಬೆಸ್ಕಾಂ) | ಗೈರು ಹಾಜರಿರುತ್ತಾರೆ |
| 6 | ಶ್ರೀ ರಂಗಪ್ಪ | ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) | ಗೈರು ಹಾಜರಿರುತ್ತಾರೆ. |
| 7 | ಶ್ರೀ ಮುಕುಂದ | ಕಂದಾಯ ಪರಿವೀಕ್ಷಕರು | ಹಾಜರಿರುತ್ತಾರೆ. |
| 8 | ಶ್ರೀ ರಾಮಚಂದ್ರ | ಟ್ಯಾಕ್ಸ್ ಇನ್ಸ್‌ಪೆಕ್ಟರ್ | ಹಾಜರಿರುತ್ತಾರೆ. |
| 9 | ಶ್ರೀ ಜಗದೀಶ್ | ಬೀದಿ ದೀಪಗಳ ನಿರ್ವಹಣೆ | ಹಾಜರಿರುತ್ತಾರೆ. |

### ಸಭೆಗೆ ಹಾಜರಾಗಿದ್ದವರ ಬಡಾವಣೆಗಳ ಕ್ಷೇಮಾಭಿವೃದ್ಧಿ ಸಂಘ/ಸಾರ್ವಜನಿಕರು ವಿವರಗಳು

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಬಡಾವಣೆಗಳ ಕ್ಷೇಮಾಭಿವೃದ್ಧಿ ಸಂಘ | ಹಾಜರಾತಿ |
|---|---|---|---|
| 1 | ಶ್ರೀ ರಾಮರಾವ್.ಕೆ.ಎಸ್ | ಶ್ರೇಯಸ್ ಕಾಲೋನಿ RWA | ಹಾಜರಿರುತ್ತಾರೆ. |
| 2 | ಶ್ರೀ ಎಂ.ಜಯರಾಮ್ | ಮುನಿಸ್ವಾಮಿಪ್ಪ ಬಡಾವಣೆ RWA | ಹಾಜರಿರುತ್ತಾರೆ. |
| 3 | ಶ್ರೀ ಸದಾಶಿವ | ಕೊತ್ತನೂರು ಗ್ರಾಮ RWA | ಹಾಜರಿರುತ್ತಾರೆ. |
| 4 | ಶ್ರೀ ಕರುಣಾಕರ | ಶ್ರೀನಿಧಿ ಬಡಾವಣೆ RWA | ಹಾಜರಿರುತ್ತಾರೆ. |
| 5 | ಶ್ರೀ ಶಿವಕುಮಾರ್ | ಬೀರೇಶ್ವರನಗರ RWA | ಹಾಜರಿರುತ್ತಾರೆ. |

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕೋಣನಕುಂಟೆ ವಾರ್ಡ್ ಸಂಖ್ಯೆ.195ರಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳಾದ ಶ್ರೀ ಟಿ.ನಟರಾಜ ರವರು ದಿನಾಂಕ: 25-05-2022 ರಂದು ಶನಿವಾರ 11.30ಕ್ಕೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸಭೆಗೆ ಆಗಮಿಸಿರುವ ಸಮಿತಿಯ ಸದಸ್ಯರಿಗೆ ಶ್ರೀ ಕಾರ್ಯದರ್ಶಿ/ಸಹಾಯಕ ಅಭಿಯಂತರರು ಆದ ಶ್ರೀ ಎಂ.ಜೆ.ಕುಮಾರ್ ರವರು ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಪು.ತಿ.ನೋ 2ಕ್ಕೆ

Scanned with CamScanner

1. ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ)

ವಾರ್ಡ್ ವ್ಯಾಪ್ತಿಯಲ್ಲಿ ಸಮರ್ಪಕವಾಗಿ ಘನತ್ಯಾಜ್ಯ ನಿರ್ವಹಣೆ ಮಾಡಲಾಗುತ್ತಿದ್ದು ನಿರ್ಧಿಷ್ಠವಾಗಿರುವುದಿಲ್ಲ ಹಾಗೂ ಕ್ರಿಮಿನಾಶಕ ಔಷಧಿಯನ್ನು ಸಿಂಪಡಣೆ ಮಾಡುವ ಕಾರ್ಯಕ್ರಮ ಕೈಗೊಳ್ಳಲು ಕೋರಲಾಗಿರುತ್ತದೆ.

ಈ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ಬೊಮ್ಮನಹಳ್ಳಿ ವಲಯ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

2. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ)

ವಾರ್ಡ್ ವ್ಯಾಪ್ತಿಯಲ್ಲಿನ ಶ್ರೇಯಸ್ ಕಾಲೋನಿಯಲ್ಲಿ ಕಾವೇರಿ ಪೈಪ್ ಲೈನ್ ಸರಿಯಾಗಿ ನಿರ್ವಹಣೆಯಾಗುತ್ತಿಲ್ಲ.

ಮೇಲ್ಕಂಡ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, (ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ) ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

3. ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಬೊಮ್ಮನಹಳ್ಳಿ ವಲಯ

ಶ್ರೇಯಸ್ ಕಾಲೋನಿ 11ನೇ ಅಡ್ಡ ರಸ್ತೆಯಲ್ಲಿ ಹೊಸದಾಗಿ ಅಳವಡಿಸಿರುವ ಎಲ್.ಇ.ಡಿ ಲೈಟ್‌ಗಳು ಸಡಿಲ ಸಂಪರ್ಕದಿಂದಾಗಿ ಕಾರ್ಯನಿರ್ವಹಿಸದೇ ಇರುವ ಬಗ್ಗೆ ದೂರಿರುತ್ತಾರೆ. ಸದರಿ ಬಡಾವಣೆಯಲ್ಲಿ ಬೀದಿ ದೀಪಗಳಿಗೆ ಟೈಮರ್‌ಗಳನ್ನು ಅಳವಡಿಸಲು ಹಾಗೂ ರಾಯಲ್ ಪಾರ್ಕ್ ಬಡಾವಣೆಯಲ್ಲಿ ಸ್ವಿಚ್‌ಅನ್ನು ಅಳವಡಿಸಲು ಕೋರಿರುತ್ತಾರೆ.

ಮೇಲ್ಕಂಡ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, (ವಿದ್ಯುತ್) ಬೊಮ್ಮನಹಳ್ಳಿ ವಲಯ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

7. ಸಹಾಯಕ ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ಬೊಮ್ಮನಹಳ್ಳಿ ವಲಯ)

ವಾರ್ಡ್ ವ್ಯಾಪ್ತಿಯಲ್ಲಿನ ಶ್ರೀನಿಧಿ ಬಡಾವಣೆ 5ನೇ ಮುಖ್ಯ ರಸ್ತೆಯಲ್ಲಿ ಇತ್ತೀಚೆಗೆ ಅಳವಡಿಸಲಾಗಿದ್ದು ಡಾಂಬರು ಅಲ್ಲಲ್ಲಿ ಕಿತ್ತು ಹೋಗಿ ರಸ್ತೆಯಲ್ಲಿ ಜಲ್ಲಿಗಳಾಗಿ ವಾಹನ ಸವಾರರಿಗೆ ತೊಂದರೆಯಾಗಿರುವ ಬಗ್ಗೆ ದೂರಿರುತ್ತಾರೆ. ಜುಂಜಘಟ್ಟ ಮುಖ್ಯ ರಸ್ತೆಯಲ್ಲಿನ ಬೃಹತ್ ನೀರುಗಾಲುವೆ ಬಳಿ ರಸ್ತೆ ಗುಂಡಿಗಳು ಬಿದ್ದಿದ್ದು ಇದನ್ನು ಕೂಡಲೇ ಮುಚ್ಚಲು ಕೋರಿರುತ್ತಾರೆ.

ಮೇಲ್ಕಂಡ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯ, ಬೊಮ್ಮನಹಳ್ಳಿ ವಲಯ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

8. ಸಹಾಯಕ ಕಾರ್ಯಪಾಲಕ ಅಭಿಯಂತರರು (ಅಂಜನಾಪುರ ಉಪ ವಿಭಾಗ)

ವಾರ್ಡ್ ವ್ಯಾಪ್ತಿಯಲ್ಲಿ ಬರುವ ಶ್ರೇಯಸ್ ಕಾಲೋನಿ ಅಡ್ಡ ರಸ್ತೆ ಮತ್ತು ಮುಖ್ಯ ರಸ್ತೆಗಳಲ್ಲಿ ಹೂಳು ತೆಗೆಯುವ ಕಾಮಗಾರಿಯನ್ನು ಕೈಗೊಳ್ಳಲು ಕೋರಿರುತ್ತಾರೆ.

ಮೇಲ್ಕಂಡ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ಸಹಾಯಕ ಕಾರ್ಯಪಾಲಕ ಅಭಿಯಂತರರು, ಅಂಜನಾಪುರ ಉಪ ವಿಭಾಗ ರವರಿಗೆ ಮಾನ್ಯ ಅಧ್ಯಕ್ಷರು ಸೂಚಿಸಿರುತ್ತಾರೆ.

9.ನೋಡಲ್ ಅಧಿಕಾರಿ:-

ಅದರಂತೆ ವಾರ್ಡ್ ನೋಡಲ್ ಅಧಿಕಾರಿ ಹಾಗೂ ಅಧ್ಯಕರಾದ ಶ್ರೀ ಟಿ.ನಟರಾಜ ರವರು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಆದ್ಯತೆ ಮೇರೆಗೆ ಸೂಕ್ತ ಕ್ರಮ ಜರುಗಿಸಲಾಗುವುದಾಗಿ ತಿಳಿಸಿ, ಸಭೆಯನ್ನು ಮುಕ್ತಾಯಗೊಳಿಸಲಾಯಿತು.

-ಸಹಿ-
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ.195 ಕೋಣನಕುಂಟೆ

-ಸಹಿ-
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ.195 ಕೋಣನಕುಂಟೆ

Scanned with CamScanner